ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಶಾಸಕರುಗಳ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು) –

346 (364) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಶಾಸಕರುಗಳಿಗೆ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಪ್ರತಿ ವರ್ಷ ನೀಡುತ್ತಿರುವ ಅನುದಾನವೆಷ್ಟು;

(ಆ) ಕಳೆದ ಮೂರು ವರ್ಷಗಳಿಂದ ಮಾನ್ಯ ಸದಸ್ಯರುಗಳಿಗೆ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಗೆ ಎಷ್ಟು ಹಣ ಬಿಡುಗಡೆಯಾಗಿದೆ; ಸರ್ಕಾರ ನಿಗದಿಪಡಿಸಿರುವ ಹಣವೆಷ್ಟು;

(ಇ) 2019-20 ಹಾಗೂ 2020-21ನೇ ಸಾಲಿನ ಅಂತ್ಯದ ವೇಳೆ ಸಮೀಪಿಸಿದ್ದರೂ ನಿಗದಿಯಾದ ಅನುದಾನ ಬಿಡುಗಡೆಯಾಗದೇ ಇರುವುದಕ್ಕೆ ಕಾರಣವೇನು; ಈ ಕುರಿತು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು;

(ಈ) ವಿಧಾನ ಪರಿಷತ್ ಸದಸ್ಯರುಗಳ ಹೆಚ್ಚಿನ ತಾಲ್ಲೂಕು ಮತ್ತು ಜಿಲ್ಲೆಗಳನ್ನು ಪ್ರತಿನಿಧಿಸುತ್ತಿರುವುದರಿಂದ ಇವರಿಗೆ ಅನುದಾನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?